ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE: 19/02/2020

# ಗದ್ದಲದಲ್ಲಿ ವಂದನಾ ನಿರ್ಣಯ: ಆಕ್ಷೇಪ



**ವಿಧಾನಸಭೆ:** ಮಂಗಳೂರು ಗೋಲಿಬಾರ್, ಬೀದರ್ ಹಾಗೂ ಹುಬ್ಬಳ್ಳಿ ಕೆಎಲ್‌ಇ ಕಾಲೇಜು ಪ್ರಕರಣಕ್ಕೆ ಸಂಬಂಧಿಸಿದಂತೆ ನಿಯಮ 60ರಲ್ಲಿ ಚರ್ಚೆಗೆ ಅವಕಾಶ ನೀಡಬೇಕೆಂಬ ಪ್ರತಿಪಕ್ಷಗಳ ಆಗ್ರಹಕ್ಕೆ ಮಣಿಯದೇ 69ರಲ್ಲಿ ಚರ್ಚೆಗೆ ಅವಕಾಶ ನೀಡುವುದಾಗಿ ಹೇಳಿ, ರಾಜ್ಯಪಾಲರ ಭಾಷಣದ ವಂದನಾ ನಿರ್ಣಯ ಮಂಡಿಸಲು ಮುಂದಾಗಿದ್ದಕ್ಕೆ ಕಾಂಗ್ರೆಸ್ ನಾಯಕರು ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ಗೋಲಿಬಾರ್ ವಿಚಾರವಾಗಿ ಯಾವಾಗ ಚರ್ಚೆಯಾಗಬೇಕು ಎನ್ನುವ ವಿಚಾರಕ್ಕೆ ಸಂಬಂಧಿಸಿದಂತೆ ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ, ದಿನೇಶ್ ಗುಂಡೂರಾವ್, ಯು.ಟಿ.ಖಾದರ್ ಹಾಗೂ ಆಡಳಿತಪಕ್ಷದ ಸಿ.ಟಿ.ರವಿ, ಬಸವರಾಜ ಬೊಮ್ಮಾಯಿ ಸೇರಿದಂತೆ ಹಲವು ನಾಯಕರ ನಡುವೆ ಜಟಾಪಟಿ ನಡೆಯುತ್ತಿರುವಾಗಲೇ, ಕಾಗೇರಿ ಅವರು ನಡಹಳ್ಳಿ ಅವರಿಗೆ ರಾಜ್ಯಪಾಲರ ಭಾಷಣಕ್ಕೆ ವಂದನಾ ನಿರ್ಣಯ ಮಂಡಿಸಲು ಸೂಚಿಸಿ, ಹರತಾಳು ಹಾಲಪ್ಪ ಅನುಮೋದಿಸಿದರು. ಇದಕ್ಕೆ ಆಕ್ಷೇಪ ವ್ಯಕ್ತಪಡಿಸಿದ ಕಾಂಗ್ರೆಸ್‌ನ ಹಿರಿಯ ಶಾಸಕ ಎಚ್.ಕೆ.ಪಾಟೀಲ್, ರಾಜ್ಯಪಾಲರ ಭಾಷಣಕ್ಕೆ ವಂದನಾ ನಿರ್ಣಯ ಮಂಡಿಸುವುದು ಪ್ರತಿಯೊಬ್ಬ ಸದಸ್ಯರ ಕರ್ತವ್ಯ. ಅದಕ್ಕೆ ನಾವು ವಿರೋಧಿಸುವುದಿಲ್ಲ. ಆದರೆ ಈ ರೀತಿ ಗದ್ದಲ ಇರುವಾಗ ವಂದನಾ ನಿರ್ಣಯ ಮಂಡಿಸುವುದಾದರೂ ಏಕೆ? ಇಷ್ಟು ಅವಸರ ಸ್ಪೀಕರ್‌ಗೆ ಏಕೆ ಎಂದು ಪ್ರಶ್ನಿಸಿದರು.

ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ಸೇರಿದಂತೆ ಕೆಲ ಕಾಂಗ್ರೆಸ್, ಈ ರೀತಿ ಅವಸರದಲ್ಲಿ ವಂದನಾ ನಿರ್ಣಯ ಮಂಡಿಸುವ ಅಗತ್ಯವೇನಿತ್ತು? ನಾವು ಇದೇ ವಿಚಾರಕ್ಕೆ ಸಂಬಂಧಿಸಿದಂತೆ ಮಾತನಾಡಬೇಕು. ಆದರೆ ಈಗಾಗಲೇ ಒಂದು ಚರ್ಚೆ ಸದನದಲ್ಲಿರುವಾಗ ಇನ್ನೊಂದು ನಿರ್ಣಯವನ್ನು ತರುವುದು ಸರಿಯಲ್ಲ ಎಂದು ಆಕ್ಷೇಪ ವ್ಯಕ್ತಪಡಿಸಿದರು.

12